# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 265 |
| ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 14.09.2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನಲ್ಲಿ ಸರ್ಕಾರಿ ಜಮೀನಿನ (ಗೋಮಾಳ) ಪಹಣಿಗಳಲ್ಲಿ ಅನಧಿಕೃತವಾಗಿ ಖಾಸಗಿ ವ್ಯಕ್ತಿಗಳ ಹೆಸರುಗಳನ್ನು ಸರ್ಕಾರದ ಯಾವುದೇ ಅನುಮತಿ ಪಡೆಯದೆ ಸೇರ್ಪಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬಂದಿದೆ. |
| ಆ | ಬಂದಿದಲ್ಲಿ, ಎಷ್ಟು ಎಕರೆಗಳೆಷ್ಟು ಸರ್ಕಾರಿ ಭೂಮಿಗಳ ದಾಖಲೆಗಳಿಗೆ ಖಾಸಗಿ ವ್ಯಕ್ತಿಗಳ ಹೆಸರು ಸೇರ್ಪಡೆಯಾಗಿದೆ; | ಗುಬ್ಬಿ ತಾಲ್ಲೂಕಿನ ಹಾಗಲವಾಡಿ, ನಿಟ್ಟೂರು, ಸಿ.ಎಸ್.ಪುರ, ಚೇಳೂರು ಹಾಗೂ ಕಸಬಾ ಹೋಬಳಿಯ ವಿವಿಧ ಸರ್ವೆ ನಂ. ಗಳಲ್ಲಿ ಸುಮಾರು 941-07 ಎಕರೆ/ಗುಂಟೆ ಸರ್ಕಾರಿ ಭೂಮಿಗಳ ದಾಖಲೆಗಳಲ್ಲಿ ಖಾಸಗಿ ವ್ಯಕ್ತಿಗಳ ಹೆಸರು ಸೇರ್ಪಡೆಯಾಗಿರುತ್ತದೆ. |
| ಇ | ಸರ್ಕಾರಿ ಭೂಮಿಗಳ ದಾಖಲೆಗಳಿಗೆ ಸರ್ಕಾರದ ಅನುಮತಿ ಪಡೆಯದೆ ಅನಧಿಕೃತವಾಗಿ ಖಾಸಗಿ ವ್ಯಕ್ತಿಗಳ ಹೆಸರುಗಳನ್ನು ಸೇರ್ಪಡೆ ಮಾಡಿ, ಅಕ್ರಮ ಮಾಡಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು? | ತುಮಕೂರು ಜಿಲ್ಲೆ, ಗುಬ್ಬಿ ಪೋಲೀಸ್ ಠಾಣೆಯಲ್ಲಿ ಐಪಿಸಿ ಕಾಯ್ದೆ 1860 ರ ಕಲಂ 406, 408, 409, 420, 465, 468, 34 ರಲ್ಲಿ ಅಪರಾಧ ಸಂಖ್ಯೆ 157/2022 ರಂತೆ ಪ್ರಕರಣ ದಾಖಲಾಗಿದ್ದು ಈ ಪ್ರಕರಣದಲ್ಲಿ 07 ಜನ ಸರ್ಕಾರಿ ನೌಕರರು, ಒಬ್ಬ ಗ್ರಾಮ ಸಹಾಯಕ, ಒಬ್ಬ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿದ್ದ ಜಿಲ್ಲಾ ಸಮಾಲೋಚಕ ಹಾಗೂ 09 ಜನ ಖಾಸಗಿ ವ್ಯಕ್ತಿಗಳನ್ನು ಪೋಲೀಸ್ ಇಲಾಖೆಯು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನದಲ್ಲಿರಿಸಿದ್ದು, ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ. |

ಸಂಖ್ಯೆ:ಆರ್‌ಡಿ/157/ಟಿಆರ್‌ಎಂ/2022

(ಆರ್. ಅಶೋಕ)
ಕಂದಾಯ ಸಚಿವರು